**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಬೆಂಗಳೂರು(ನ) ಜಿಲ್ಲೆಯಲ್ಲಿ ಕುಡಿಯುವ ನೀರು ಸರಬರಾಜು ಯೋಜನೆಗಳ ಬಾಕಿ ಬಿಲ್ ಪಾವತಿಗಾಗಿ ಅನುದಾನ ಬಿಡುಗಡೆ ಕುರಿತು.

ಓದಲಾಗಿದೆ: ಬೆಂಗಳೂರು (ನ) ಜಿಲ್ಲಾ ಪಂಚಾಯತ್ ಪತ್ರ ಸಂಖ್ಯೆ: ಯೋವಿ/1/CR-1/ಭಾಗ/2009-10, ದಿ:16.3.2011

---

**ಪೀಠಿಕೆ:**

ಮೇಲೆ ಓದಲಾದ ಪತ್ರದಲ್ಲಿ ಈಗಾಗಲೇ ಬೆಂಗಳೂರು(ನ) ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ 2009-10ರಲ್ಲಿ ಪ್ರಾಂತೀಯ ಆಯುಕ್ತರು ಹಾಗೂ ಆಡಳಿತಾಧಿಕಾರಿಗಳು ಅನುಮೋದಿಸಿರುವ ಕ್ರಿಯಾ ಯೋಜನೆ ಪ್ರಕಾರ ಗ್ರಾಮೀಣ ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನವನ್ನು 2010-11ರ ಸಾಲಿನಲ್ಲಿ ಕೈಗೆತ್ತಿಕೊಂಡು ಅನುಷ್ಠಾನಗೊಳಿಸಿರುವ ಬಾಕಿ ಬಿಲ್ ಬಾಬ್ತು ರೂ.405.05ಲಕ್ಷ ಮೊತ್ತದ ಬೇಡಿಕೆ ಕುರಿತು ಪ್ರಸ್ತಾಪಿಸಲಾಗಿದೆ. ಸದರಿ ಬಿಲ್ ಪಾವತಿ ಪ್ರಸ್ತಾವನೆ ಹಿಂದಿನ ಬಾಕಿ ಬಿಲ್ ಪ್ರಸ್ತಾವನೆಯಲ್ಲಿ ಹಾಗೂ Non-Targeted habitations ಬಾಬ್ತಿನಡಿ ಕೈಬಿಟ್ಟು ಹೋಗಿರುವುದಾಗಿ ತಿಳಿಸಲಾಗಿದೆ. ಪ್ರಸಕ್ತ ಸಾಲಿನಲ್ಲಿ Coverage & Quality ಬಾಬ್ತಿನಡಿ ಬಿಡುಗಡೆಯಾದ ಅನುದಾನವನ್ನು ಬೆಂಗಳೂರು(ನ) ಜಿಲ್ಲಾ ಪಂಚಾಯತ್ ಸಂಪೂರ್ಣವಾಗಿ ವಿನಿಯೋಗಿಸಿಕೊಂಡಿರುವುದರಿಂದ, ಬಾಕಿ ಬಿಲ್‌ಗಳ ಪಾವತಿಗಾಗಿ ರೂ.405.05ಲಕ್ಷಗಳನ್ನು ರಾಜ್ಯ ವಲಯದ Coverage & Quality ಖಾತೆಯಡಿ ಬಿಡುಗಡೆ ಮಾಡಲು ನಿರ್ಧರಿಸಿದೆ. ಆದ್ದರಿಂದ, ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ /21/ ಗ್ರಾನೀಸ (4) 2011 ಬೆಂಗಳೂರು, ದಿನಾಂಕ:02.04.2011**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ರೂ.405.05ಲಕ್ಷ (ನಾಲ್ಕು ನೂರ ಐದು ಲಕ್ಷದ ಐದು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಕುಡಿಯುವ ನೀರಿನ ಕಾಮಗಾರಿಗಳ ಬಾಕಿ ಬಿಲ್ ಪಾವತಿ ಸಂಬಂಧ, **ಬೆಂಗಳೂರು(ನ)** ಜಿಲ್ಲಾ ಪಂಚಾಯತಿಗೆ ರಾಜ್ಯ ವಲಯದಡಿ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ 2009-10ರ ಸಾಲಿನಲ್ಲಿ ವಾಸ್ತವಿಕವಾಗಿ ಅನುಮೋದನೆಯಾಗಿ ಸಮಸ್ಯಾತ್ಮಕ ಗ್ರಾಮಗಳನ್ನು ಆವರಿಸುವ ಸಂಬಂಧ ಈಗಾಗಲೇ 2010-11ರಲ್ಲಿ ಅನುಷ್ಠಾನವಾಗಿರುವ ತುರ್ತು ಕಾಮಗಾರಿಗಳ ಬಾಬ್ತಿನ ವೆಚ್ಚ ಭರಿಸಲು ಮಾತ್ರ ಈ ಅನುದಾನವನ್ನು ವಿನಿಯೋಗಿಸಲು ಕ್ರಮ ವಹಿಸುವುದು. CE/PRED ಅದರಂತೆ ಯೋಜನಾವಾರು ವಿವರಗಳನ್ನು ದೃಢೀಕರಿಸಿ, ಜಿಲ್ಲಾ ಪಂಚಾಯತಿಗಳು ತತ್ಸಂಬಂಧದ ಕಾಮಗಾರಿಗಳ ಬಿಲ್ ಪಾವತಿಗಾಗಿಯೇ ಹಣ ಪಾವತಿಸಿರುವುದನ್ನು ಖಾತ್ರಿ ಪಡಿಸತಕ್ಕದ್ದು.

3. ಅನುಷ್ಠಾನಗೊಳಿಸಿರುವ ಕಾಮಗಾರಿಗಳ ಆರ್ಥಿಕ ಮತ್ತು ಭೌತಿಕ ವಿವರಗಳ ದಾಖಲೆಗಳನ್ನು ಜನವಸತಿಗಳ ಹೆಸರುಗಳನ್ನೊಳಗೊಂಡಂತೆ ಸಮರ್ಪಕವಾಗಿ ನಿರ್ವಹಣೆ ಮಾಡತಕ್ಕದ್ದು. ಹಾಗೂ ಅನುಷ್ಠಾನಗೊಳಿಸಿರುವ ಕಾಮಗಾರಿಗಳ ವಿವರಗಳನ್ನು ಸಂಬಂಧಪಟ್ಟ ಗ್ರಾಮಪಂಚಾಯತ್‌ಗಳಿಗೆ ದಾಖಲೆ ಸಲುವಾಗಿ ಕಳುಹಿಸತಕ್ಕದ್ದು.

4. ಪ್ರಗತಿ ವರದಿಯನ್ನು ಹಾಗೂ ಹಣ ಬಳಕೆ ಪ್ರಮಾಣ ಪತ್ರವನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ಇವರಿಗೆ ಹಾಗೂ ಸರ್ಕಾರಕ್ಕೆ ಸಲ್ಲಿಸುವುದು ಮತ್ತು ಸದರಿ ಪ್ರಗತಿಯನ್ನು IMISನಡಿ ದಾಖಲಿಸತಕ್ಕದ್ದು.

5. CE/PRED ಹಾಗೂ ಜಿಲ್ಲಾ ಪಂಚಾಯತಿಗಳು ಬಿಡುಗಡೆಯಾದ 50% ಅನುದಾನವನ್ನು ರಾಜ್ಯದ ಪಾಲಾಗಿ ಲೆಕ್ಕಶೀರ್ಷಿಕೆ 4215-01-102-9-01-059ರಡಿ ಹಾಗೂ ಉಳಿದ 50% ಅನುದಾನವನ್ನು ಕೇಂದ್ರವಲಯದ ಅನುದಾನವೆಂದು ಗಣನೆಗೆ ತೆಗೆದುಕೊಳ್ಳತಕ್ಕದ್ದು. ಅಂತೆಯೇ, ಈ ಆದೇಶದಲ್ಲಿ ಬಿಡುಗಡೆಯಾದ ರಾಜ್ಯ ಮತ್ತು ಕೇಂದ್ರ

ವಲಯದ ಅನುದಾನವನ್ನು 50 : 50 ಅನುಪಾತದಲ್ಲಿ ಸಿಂಡಿಕೇಟ್ ಬ್ಯಾಂಕ್ ಮೂಲ ಖಾತೆ ಸಂಖ್ಯೆ:04462010091577ಯಿಂದ SWSM, C&Q ಖಾತೆ ಸಂಖ್ಯೆ:04462010094572ಕ್ಕೆ ವರ್ಗಾಯಿಸಿ, ಬೆಂಗಳೂರು(ನ) ಜಿಲ್ಲಾ ಪಂಚಾಯತಿ ಈ ಬಾಬ್ತಿನಡಿ RTGS ಮುಖೇನ ಕಳುಹಿಸುವ ಬಿಲ್ ಮಾನ್ಯ ಮಾಡತಕ್ಕದ್ದು.

6. ಈ ಆದೇಶವನ್ನು 2011-12ನೇ ಸಾಲಿನಲ್ಲಿ ಯೋಜನೆಗಳ ಮುಂದುವರಿಕೆಗಾಗಿ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ 28 ಗ್ರಾನೀಸ(2) 11, ದಿ:02.4.2011ರಲ್ಲಿನ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಮಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ (ಗ್ರಾನೀಸ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಗಳು :**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
9. ವಿಶೇಷಾಧಿಕಾರಿ(ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು-1
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಸಂಕೀರ್ಣ, ಅಭಯ ಸಂಕೀರ್ಣ,4ನೇ ಮಹಡಿ,ನಂ.55, ರಿಸಲ್ದಾರ್ ರಸ್ತೆ, ಶೇಷಾದ್ರಿಪುರ , ಬೆಂಗಳೂರು-20.
12. ಜಿಲ್ಲಾ ಪಂಚಾಯತ್ ಅಧ್ಯಕ್ಷರು, ಬೆಂಗಳೂರು(ನ).
13. ಜಿಲ್ಲಾಧಿಕಾರಿಗಳು, ಬೆಂಗಳೂರು(ನ).
14. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಬೆಂಗಳೂರು(ನ).
15. ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಅಧೀಕ್ಷಕ ಅಭಿಯಂತರು, ಬೆಂಗಳೂರು(ನ).
16. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜಿನಿಯರ್‌ಗಳು, ಬೆಂಗಳೂರು(ನ).
17. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED ಬೆಂಗಳೂರು.
18. ಸಹ ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
19. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ (ಪಂರಾ) ಇವರ ಆಪ್ತ ಕಾರ್ಯದರ್ಶಿಗಳು.
20. ನಿರ್ದೇಶಕರು, KRWSSA ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ/ ಅಪರ ನಿರ್ದೇಶಕರು (ಆರ್ಥಿಕ) KRWSSA/SWSM, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಕಾವೇರಿ ಭವನ, ಬೆಂಗಳೂರು / ನಿರ್ದೇಶಕರು(ಗ್ರಾಮಸ್ವರಾಜ್)/ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರುಗಳ ಆಪ್ತ ಸಹಾಯಕರು.
21. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, ರಾಜಪೂತ್ ಕಾಂಪ್ಲೆಕ್ಸ್, ಅವೆನ್ಯು ರಸ್ತೆ, ಬೆಂಗಳೂರು.
22. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ ಕರ್ನಾಟಕ ವಿಕಾಸ ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
23. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
24. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
25. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು). 26.ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.